



ಅರುಣ ಪಿ. ಭಟ್ಟ

## ವಾರಭವಿಷ್ಯ: 31.07.2025ರಿಂದ 06.08.2025ರವರೆಗೆ



**ಮೇಷ**

ನಿಮ್ಮ ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ನಿಮ್ಮ ಸಹೋದ್ಯೋಗಿಗಳ ಭಿನ್ನಾಭಿಪ್ರಾಯ ಮರೆಯುತ್ತೀರಿ. ನಿಮ್ಮ ಕಾರ್ಯಗಳ ವಿಸ್ತರಣೆಗೆ ತೀರ್ಮಾನವೊಂದನ್ನು ಕೈಗೊಳ್ಳಲಿದ್ದೀರಿ. ಶುಭದಿನ: 31. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.



**ವೃಷಭ**

ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ. ಈ ಅವಧಿಯಲ್ಲಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ಯಾವುದೇ ಕೆಲಸಗಳಲ್ಲಿ ಯಶಸ್ಸು ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ ಹೆಚ್ಚುವ ಸಾಧ್ಯತೆ ಇದೆ. ಹಿರಿಯ ಅಧಿಕಾರಿಗಳು ಜೊತೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಬಾಕಿ ಇರುವ ಹಲವು ಕೆಲಸಗಳನ್ನು ಪೂರ್ಣಗೊಳಿಸುತ್ತೀರಿ. ಶುಭದಿನ: 02. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.



**ಮಿಥುನ**

ಆರೋಗ್ಯ ಸುಧಾರಿಸುವುದು. ಆಕಸ್ಮಾತ್ ಖರ್ಚು ಸಂಭವ. ಆಸ್ತಿ ಖರೀದಿ ಬಗ್ಗೆ ಚಿಂತನೆ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ, ವ್ಯಾವಹಾರಿಕ ಅನುಕೂಲತೆ. ಸರಕಾರಿ ಕೆಲಸ ಶೀಘ್ರ ಆಗುವುದು. ತಂದೆ ತಾಯಿಯವರ ಆರೋಗ್ಯ ಸುಧಾರಣೆ. ನಿಮ್ಮ ಕೆಲಸಗಳಿಗೆ ಮನ್ನಣೆ ದೊರೆಯುವುದು. ಶುಭದಿನ: 02. ಚಂಡಿ ಪಾರಾಯಣ ಮಾಡಿರಿ.



**ಕಟಕ**

ವಾರದ ಆರಂಭದಲ್ಲಿ ಮನಸಿನಲ್ಲಿ ನವೋಲ್ಲಾಸ ಮೂಡುವುದು. ಧರ್ಮ ದಾನಕ್ಕಾಗಿ ಖರ್ಚು. ಮಿತ್ರರಿಗೆ ಸಹಾಯ. ವ್ಯಾಪಾರದಲ್ಲಿ ಅಧಿಕ ಲಾಭ ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರಿಯುವುದು. ಹೊಟ್ಟೆನೋವಿನ ಕಾಟ. ಮನೆಯಲ್ಲಿ ಸಂಭ್ರಮ. ಮಕ್ಕಳಿಂದ ಶುಭವಾರ್ತೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ. ಸಹೋದರರ ಸಹಾಯ. ಶುಭದಿನ: 05. ಶಿವ ಕವಚ ಓದಿರಿ.



**ಸಿಂಹ**

ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮಾಡಿ ಮುಗಿಸುತ್ತಾರೆ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಆದರೆ ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಶುಭದಿನ: 04. ಸೌಂದರ್ಯಲಹರಿ ಪಠಿಸಿರಿ.



**ಕನ್ಯಾ**

ನಿಮ್ಮ ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಹಲವು ವ್ಯಕ್ತಿಗಳ ಪರಿಚಯ ಆಗುತ್ತದೆ. ಸಂಗಾತಿ ಜೊತೆ ಇದನ್ನು ಹಂಚಿಕೊಳ್ಳುತ್ತೀರಿ. ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ಈವರೆಗಿನ ನಿಮ್ಮ ಆದಾಯ ಮೂಲಗಳಿಂದ ಬರುವ ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ. ನಿಮ್ಮ ಹಣದ ಮೂಲವನ್ನು ಸರಿಯಾದ ದಾರಿಯಲ್ಲಿ ವಿತರಿಸಲು ಯಶಸ್ಸು ಸಾಧಿಸುತ್ತೀರಿ. ಶುಭದಿನ: 03. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




**ತುಲಾ**

ವೃತ್ತಿಪರ ಬದುಕಿನಲ್ಲಿ ಪ್ರಗತಿ ಕಾಣುವ ಯೋಗ ಇದೆ. ಬಡ್ತಿ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ವಾರದ ಮಧ್ಯಭಾಗದಲ್ಲಿ ಪ್ರಗತಿ ಮತ್ತಷ್ಟು ವೇಗ ಪಡೆದುಕೊಳ್ಳುತ್ತದೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಆರೋಗ್ಯವು ಚೆನ್ನಾಗಿರುತ್ತದೆ. ಕಾನೂನು ವ್ಯಾಜ್ಯಗಳಲ್ಲಿ ಎದುರು ಪಕ್ಷದವರು ಸರಿಸಮವಾದ ಹೋರಾಟ ಮಾಡುತ್ತಾರೆ. ಶುಭದಿನ: 06. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.



**ವೃಶ್ಚಿಕ**

ಬಹಳ ಮುಖ್ಯವಾದ ಪಟ್ಟಿಯೊಂದನ್ನು ಸಿದ್ಧಮಾಡಿಕೊಳ್ಳುತ್ತೀರಿ. ಈ ಅವಧಿಯಲ್ಲಿ ತಾಳ್ಮೆ, ಧೈರ್ಯ ಬಹಳ ಮುಖ್ಯವಾಗುತ್ತದೆ. ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ಶುಭದಿನ: 04. ಶ್ರೀ ದುರ್ಗಾಪಾರಾಯಣ ಮಾಡಿರಿ.



**ಧನಸ್ಸು**

ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಕಾಗದ ಪತ್ರಗಳನ್ನು ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದ ತಡೆಯುವಂತಹ ಸನ್ನಿವೇಶಗಳು ನಿಮಗೆ ಪೂರಕ ಆಗಲಿದೆ. ವೈಯಕ್ತಿಕ ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳು ಆಗಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬದವರ ಬೆಂಬಲ ದೊರೆಯಲಿದೆ. ತಾಂತ್ರಿಕ ಶಿಕ್ಷಣದಲ್ಲಿ ಅತ್ಯುತ್ತಮ ಪ್ರಗತಿ ಇದೆ. ಶುಭದಿನ: 05. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.



**ಮಕರ**

ವ್ಯಾಪಾರದಲ್ಲಿ ಪ್ರಗತಿ ಕಾಣಿಸುತ್ತದೆ. ಇದರಿಂದ ಆತ್ಮವಿಶ್ವಾಸ ಹೆಚ್ಚಾಗುತ್ತದೆ. ಪ್ರತಿಷ್ಠಿತ ಸಂಸ್ಥೆಯೊಂದರ ಜೊತೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆಗಳಿವೆ. ಉದ್ಯಮ ವಿಸ್ತರಣೆ ಬಗ್ಗೆ ಮುಖ್ಯವಾದ ತೀರ್ಮಾನವನ್ನು ಕೈಗೊಳ್ಳಲಿದ್ದೀರಿ. ವೈವಾಹಿಕ ಜೀವನ ಸಂತೋಷದಾಯಕವಾಗಿ ಇರುತ್ತದೆ. ಮುಖ್ಯವಾದ ಕೆಲಸ ಮುಂದೂಡಬೇಕಾದ ಸನ್ನಿವೇಶ ಎದುರಾಗುತ್ತದೆ. ಶುಭದಿನ: 05. ಕಾಲಭೈರವನ ಸೇವೆ ಮಾಡಿರಿ.



**ಕುಂಭ**

ನಿಮ್ಮ ಹಣದ ಸದುಪಯೋಗ ಮಾಡಿಕೊಳ್ಳುವ ಯೋಜನೆ ರೂಪಿಸಲಿದ್ದೀರಿ. ಅದರ ಅನುಷ್ಠಾನಕ್ಕಾಗಿ ಹಾಕುವ ಶ್ರಮಕ್ಕೆ ನಿರೀಕ್ಷಿತ ಫಲಿತಾಂಶ ಕೂಡ ದೊರೆಯಲಿದೆ. ಮಾರಾಟ ಕ್ಷೇತ್ರದಲ್ಲಿದ್ದವರಿಗೆ ಲಾಭ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಎಲ್ಲ ಸಾಧ್ಯತೆಗಳಿವೆ. ಶುಭದಿನ: 05. ಗಣಪತಿಗೆ ದೂರ್ವಾರ್ಚನೆ ಮಾಡಿರಿ.



**ಮೀನ**

ವಾರದ ಆರಂಭದಲ್ಲಿ ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸಿನ ಸಾಧ್ಯತೆ ಹೆಚ್ಚಿದೆ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕ ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಇದೆ. ಆರೋಗ್ಯದಲ್ಲಿ ಚೇತರಿಕೆ ಕಾಣಿಸಿಕೊಳ್ಳುತ್ತದೆ. ಇದರಿಂದ ನಿಮ್ಮ ಮನಸಿಗೆ ಸಂತೋಷವಾಗುತ್ತದೆ. ಈ ವಾರ ಆದಾಯ ಅನುಕೂಲಕರವಾಗಿರಲಿದೆ. ಶುಭದಿನ: 02. ಕನಕಧಾರಾ ಸ್ತೋತ್ರ ಪಠಿಸಿ.